ವೇತನ ಪರಿಷ್ಕರಣಕ್ಕೆ ಸಂಬಂಧಪಟ್ಟಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಹಾಕಿಕೊಟ್ಟ "ವಲಯ–ಉದ್ಯಮ" ಸೂತ್ರವನ್ನು ಕೆಪಿಸಿಎಲ್ ಅನುಸರಿಸುತ್ತಿದೆ ಈಗಿನ ಉದ್ದೇಶಿತ ನೀಡಿಕೆಯು ಈ ಸೂತ್ರಕ್ಕೆ ಅನುಗುಣವಾಗಿದ್ದು ಕೆಪಿಸಿಎಲ್ ನ ಉದ್ಯೋಗಿಗಳು ರಾಜ್ಯದಲ್ಲಿರುವ ವಿದ್ಯುತ್ ಉದ್ಯಮದಲ್ಲಿನ ಇತರ ಸಂಸ್ಥೆಗಳಲ್ಲಿನ ಕಾರ್ಮಿಕರಿಗಿಂತ ಹೆಚ್ಚಿನ ಲಾಭವನ್ನು ಇದರಿಂದ ಪಡೆಯಲಿರುವರು ಆದುದರಿಂದ ಉದ್ದೇಶಿತ ಕೊಡುಗೆಯು ನ್ಯಾಯಯುತವೂ ಹಾಗೂ ಸಮರ್ಥನೀಯವೂ ಆಗಿರುತ್ತದೆ

ಇ) ಸೌಲಭ್ಯಗಳು ಇಲ್ಲದಿರುವಲ್ಲಿ ಹಣಕಾಸಿನ ಪರಿಹಾರ ನೀಡಲಾಗುತ್ತಿದ್ದು ಯಾವುದೇ ತಾರತಮ್ಯವಿರುವುದಿಲ್ಲ

342 (319) ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು) . ಮಾನ್ಯ ಲೋಕೋಪಯೋಗಿ ಹಾಗೂ ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಿಂದ ಶಿವಮೊಗ್ಗ ಜಿಲ್ಲೆಗೆ ನೇರ ಸಂಪರ್ಕ ಕಲ್ಪಿಸುವ ಬೈಂದೂರು–ಕಾರ್ನಿ–ಸಾಗರ ರಸ್ತೆಯನ್ನು ನಿರ್ಮಿಸಲು ತುಂಬಾ ವರ್ಷದಿಂದ ಆ ಭಾಗದ ಜನರು ಸರ್ಕಾರಕ್ಕೆ ಹಲವಾರು ಮನವಿಗಳನ್ನು ಸಲ್ಲಿಸಲಾಗಿರುವುದು ನಿಜವೇ,

ಆ) ಹಾಗಿದ್ದಲ್ಲಿ ಈ ರಸ್ತೆ ನಿರ್ಮಾಣ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಹಾಗೂ ಇಂಧನ ಸಚಿವರು)

ಅ) ಹೌದು

ಆ) ಬೈಂದೂರು–ಗಂಗನಾಡು–ಕಾರ್ನಿ–ಸಾಗರ ರಸ್ತೆಯು ಒಟ್ಟಾರೆ 85 ಕಿಮೀ ಉದ್ದವಿರುತ್ತದೆ ಇದರಲ್ಲಿ ಉಡುಪಿ ಜಿಲ್ಲೆಯಲ್ಲಿನ ಕುಂದಾಪುರ ತಾಲ್ಲೂಕಿನಲ್ಲಿ ಬೈಂದೂರಿನಿಂದ ಗಂಗನಾಡು ವರೆಗೆ 9 ಕಿ ಮೀ ಉದ್ದವಿದ್ದು ಇದು ಗ್ರಾಮೀಣ ರಸ್ತೆಯಾಗಿರುತ್ತದೆ ಗಂಗನಾಡುನಿಂದ ಕಾರ್ನಿವರೆಗೆ ಒಟ್ಟಾರೆ 12 ಚಕಿಮೀ ಇದ್ದು ಇದು ವನ್ಯ ಜೀವಿ ರಕ್ಷಿತ ಅರಣ್ಯಪ್ರದೇಶದಲ್ಲಿ ಹಾದುಹೋಗುತ್ತಿದೆ (ಕಾಲುದಾರಿ) ಸದರಿ ಪ್ರದೇಶವು ಅರಣ್ಯ ಪ್ರದೇಶದಲ್ಲಿ ಹಾದು ಹೋಗುತ್ತಿರುವುದರಿಂದ ರಸ್ತೆ ನಿರ್ಮಾಣಕ್ಕೆ ಅರಣ್ಯ ಇಲಾಖೆಯಿಂದ ಹಾಗೂ ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆತಿರುವುದಿಲ್ಲ ಕಾರ್ನಿಯಿಂದ ಸಾಗರಕ್ಕೆ 66 00 ಕಿಮೀ ಉದ್ದವಿದ್ದು ಇದರಲ್ಲಿ ಪ್ರಾರಂಭಿಕ 3

ಕಿಮೀ ಉದ್ದ ಗ್ರಾಮೀಣ ರಸ್ತೆಯಾಗಿದ್ದು ಉಳಿದ 63 00 ಕಿಮೀ ಉದ್ದ ಜಿಲ್ಲಾ ಮುಖ್ಯ ರಸ್ತೆಯಾಗಿರುತ್ತದೆ

345 (317) ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು) ಮಾನ್ಯ ಕೃಷಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಅದರಲ್ಲೂ ಮುಖ್ಯವಾಗಿ ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನ ರೈತರು ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ (ಜಿಲ್ಲಾವಾರು ಮಾಹಿತಿ ನೀಡುವುದು),

ಆ) ಇಂತಹ ಆತ್ಮಹತ್ಯೆಗಳನ್ನು ನಿಲ್ಲಿಸಲು ಸರ್ಕಾರದಿಂದ ಏನಾದರೂ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆಯೇ,

ಇ) ಹಾಗಿದ್ದಲ್ಲಿ ಆ ಕ್ರಮಗಳು ಯಾವುದು?

ಶ್ರೀ ಬಂಡೆಪ್ಪ ಕಾಶಂಪೂರ್ (ಕೃಷಿ ಸಚಿವರು)

ಅ) ರಾಜ್ಯದಲ್ಲಿ ಕಳೆದ 3 ವರ್ಷದ ಅವಧಿಯಲ್ಲಿ ಒಟ್ಟು 1301 ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾಗಿದ್ದು ಇವುಗಳ ಪೈಕಿ ಉಡುಪಿ ಜಿಲ್ಲೆಯಲ್ಲಿ 4 ಪ್ರಕರಣಗಳು ವರದಿಯಾಗಿದೆ ಜಿಲ್ಲಾವಾರು ರೈತರ ಆತ್ಮಹತ್ಯೆ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ

ಆ) ರೈತರ ಆತ್ಮಹತ್ಯೆ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರವು ಸಾಧ್ಯವಾದ ಎಲ್ಲಾ ಕ್ರಮಗಳನ್ನು ತೆಗೆದುಕೊಂಡಿರುತ್ತದೆ

ಇ) ರೈತರ ಆತ್ಮಹತ್ಯೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳು ಇಂತಿವೆ

ಅ) ಶೇ 4ರ ಬಡ್ಡಿ ದರದಲ್ಲಿ ಸಹಕಾರಿ ಸಂಸ್ಥೆಗಳ ಮೂಲಕ ರೈತರಿಗೆ ಸಾಲ ನೀಡುವುದು

ಆ) ಶೇ 75ರ ರಿಯಾಯಿತಿ ದರದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಬಿತ್ತನೆ ಬೀಜ ವಿತರಿಸುವುದು

ಇ) ಬೆಂಬಲ ಬೆಲೆಗಿಂತ ಮಾರುಕಟ್ಟೆಯಲ್ಲಿ ಕೃಷಿ ಉತ್ಪನ್ನಗಳ ದರವು ಕುಸಿದಲ್ಲಿ ಮಾರುಕಟ್ಟೆ ಮಧ್ಯಪ್ರದೇಶದ ಮೂಲಕ ರೈತರ ಕೃಷಿ ಉತ್ಪನ್ನಗಳ ಖರೀದಿ

ಈ) ಟ್ರಾಕ್ಟರ್, ಪವರ್ ಟಿಲ್ಲರ್‌ಗಳಿಗೆ ಶೇ 50 ರ ರಿಯಾಯಿತಿ ದರದಲ್ಲಿ ವಿತರಣೆ

ಉ) ಎತ್ತು ಮತ್ತು ಬಂಡಿಯನ್ನು ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಶೇ 50 ರ ರಿಯಾಯಿತಿಯಲ್ಲಿ ವಿತರಣೆ